ಪ್ರಜಾವಾಣಿ -23-11-2023


ಪ್ರಜಾವಾಣಿ

# ಸುಗಮ ಕಲಾಪಕ್ಕೆ ಹೊರಟ್ಟಿ ಆಗ್ರಹ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬೆಳಗಾವಿಯಲ್ಲಿ ಡಿಸೆಂಬರ್ 4ರಿಂದ ಆರಂಭವಾಗುವ ವಿಧಾನಮಂಡಲ ಅಧಿವೇಶನದಲ್ಲಿ ಗದ್ದಲ, ಪ್ರತಿಭಟನೆಗಳನ್ನು ನಿಯಂತ್ರಿಸಿ ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳ ಕುರಿತ ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಪ್ರತಿಭಟನೆಯನ್ನು ತಡೆಯಲು ಬಾಕಿ ಇರುವ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನಿಸುವಂತೆ ಉನ್ನತ ಶಿಕ್ಷಣ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಕಂದಾಯ ಹಾಗೂ ಕೃಷಿ ಸಚಿವರು ಮತ್ತು ಮುಖ್ಯಮಂತ್ರಿಯವರಿಗೆ ಪತ್ರ ಬರೆದು ಒತ್ತಾಯಿಸಿದ್ದೇನೆ' ಎಂದರು.



ಸರ್ಕಾರವು ಪ್ರತಿಭಟನಾಕಾರರಿಗೆ ಉತ್ತೇಜನ ನೀಡುವಂತೆ ವರ್ತಿಸಬಾರದು ಎಂದು ಕೋರಲಾಗಿದೆ. ಪ್ರತಿಭಟನೆ, ಧರಣಿ ನಡೆಯುತ್ತಿದ್ದರೆ ಸಚಿವರು ಮತ್ತು ಶಾಸಕರು ಸಕ್ರಿಯವಾಗಿ ಕಲಾಪದಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದರು.

2022 ರ ಡಿಸೆಂಬರ್ ತಿಂಗಳಲ್ಲಿ ಬೆಳಗಾವಿಯಲ್ಲಿ 10 ದಿನಗಳ ಕಾಲ ವಿಧಾನಮಂಡಲದ ಅಧಿವೇಶನ ನಡೆದಿತ್ತು. ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ 102 ಸಂಘಟನೆಗಳು ಮನವಿ ಸಲ್ಲಿಸಿದ್ದವು. ಆ ಪೈಕಿ 64 ಸಂಘಟನೆಗಳು ಪ್ರತಿಭಟನೆಗಳನ್ನು ನಡೆಸಿದ್ದವು. 65,000 ದಿಂದ 80,000 ದಷ್ಟು ಜನರು ಪ್ರತಿಭಟನೆಗಳನ್ನು ಭಾಗಿಯಾಗಿದ್ದರು ಎಂದು ವಿವರ ನೀಡಿದರು.


ಈ ಅಧಿವೇಶನದಲ್ಲಿ ಐದರಿಂದ ಆರು ದಿನಗಳನ್ನು ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ಚರ್ಚೆಗೆ ಮೀಸಲಿಡಲಾಗುವುದು. ಮಂಡನೆಗೂ ಮೊದಲು ಮಸೂದೆಗಳ ಪ್ರತಿಗಳನ್ನು ಒದಗಿಸುವುದು ಕಡ್ಡಾಯ. ತರಾತುರಿಯಲ್ಲಿ ಮಸೂದೆ ಮಂಡನೆಗೆ ಅವಕಾಶ ನೀಡುವುದಿಲ್ಲ ಎಂದರು.

ಬೆಳಗಾವಿಯಲ್ಲಿ ಶಾಸಕರ ಭವನ ನಿರ್ಮಾಣಕ್ಕೆ ಗುರುತಿಸಿರುವ 20 ಎಕರೆ ಜಮೀನಿನಲ್ಲಿ ತಾರಾ ಹೋಟೆಲ್ ನಿರ್ಮಾಣದ ಪ್ರಸ್ತಾವಕ್ಕೆ ಸರ್ಕಾರ ಒಪ್ಪಿಗೆ ನೀಡಬೇಕು. ಇದರಿಂದ ಆರ್ಥಿಕ ಹೊರೆ ತಗ್ಗುತ್ತದೆ ಎಂದು ಹೊರಟ್ಟಿ ಹೇಳಿದರು.

ಜನದನಿಯ ಸಾರಥಿ
ವಾರ್ತಾ ಭಾರತಿ

# ಪ್ರತಿಭಟನೆಗಳ ಸಂಖ್ಯೆ ತಗ್ಗಿದರೆ ಅಧಿವೇಶನದಲ್ಲಿ ಅರ್ಥಪೂರ್ಣ ಚರ್ಚೆ

## ಬಸವರಾಜ ಹೊರಟ್ಟಿ



ಬೆಂಗಳೂರು, ನ.22: ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾಗುವ ಜತೆಗೆ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದಕ್ಕೆ ಸಾರ್ಥಕವಾಗುತ್ತದೆ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಬುಧವಾರ ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.4ರಿಂದ ಬೆಳಗಾವಿ ಅಧಿವೇಶನ ಆರಂಭವಾಗುತ್ತಿದೆ. ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡುವಂತೆ ಮುಖ್ಯಮಂತ್ರಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.

ಪ್ರತೀ ಬಾರಿ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನಡೆಯುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಉತ್ತರ ಕರ್ನಾಟಕವೂ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ರೈತ ಸಂಘ, ಶಿಕ್ಷಕರ ಸಂಘ, ನೌಕರರ ಸಂಘ, ಕನ್ನಡ ಪರ ಸಂಘಟನೆಗಳು ಸೇರಿದಂತೆ ನೂರಾರು ಸಂಘ ಸಂಸ್ಥೆಗಳು ತಮ್ಮ ಹಲವಾರು ಸಮಸ್ಯೆ, ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ನಿರಂತರವಾಗಿ ಧರಣಿ, ಸತ್ಯಾಗ್ರಹ, ಪ್ರತಿಭಟನೆ ನಡೆಸುವುದು ಸರ್ವೇ ಸಾಮಾನ್ಯವಾಗಿದೆ.

ಒಂದು ಅರ್ಥದಲ್ಲಿ ಬೆಳಗಾವಿಯ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಕಲ್ಪಿಸಿದಂತಾಗಿದೆ ಎಂದರೆ ಅತಿಶಯೋಕ್ತಿ ಎನಿಸಲಾರದು ಎನ್ನುವುದು ಹಲವರ ಅಭಿಪ್ರಾಯವಾಗಿದ್ದು, ಬಹಳಷ್ಟು ಜನ ಈ ರೀತಿಯ ಭಾವನೆಯನ್ನು ನನ್ನ ಮುಂದೆ ವ್ಯಕ್ತಪಡಿಸಿದ್ದಾರೆ ಎಂದು ಅವರು ಉಲ್ಲೇಖಿಸಿದರು.

43 ವರ್ಷಗಳಿಂದ ಪರಿಷತ್ತಿನ ಸದಸ್ಯನಾಗಿ ಹಾಗೂ ಮೂರನೆ ಬಾರಿ ಸಭಾಪತಿಯಾಗಿ ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಕೆಲಸ ನಿರ್ವಹಿಸುತ್ತಿದ್ದೇನೆ. ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವ ಹಿನ್ನೆಲೆಯಲ್ಲಿ ಸರಕಾರಕ್ಕೆ ಸಲಹೆ ನೀಡಬಯಸುವುದು ಸೂಕ್ತ ಎಂದು ನಾನು ಭಾವಿಸುತ್ತೇನೆ. ಈ ಕುರಿತಂತೆ ಮುಖ್ಯಮಂತ್ರಿಗೆ ಹಾಗೂ ಕೃಷಿ, ಕಂದಾಯ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಿಗೆ ಪತ್ರ ಬರೆದು ನನ್ನ ಭಾವನೆಗಳನ್ನು ಹಂಚಿಕೊಂಡಿದ್ದೇನೆ ಎಂದು ತಿಳಿಸಿದರು.

### ಎರಡು ದಿನ ಉ.ಕರ್ನಾಟಕ ಕುರಿತು ಚರ್ಚೆ

ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ಕಲಾಪದ ಎರಡು ದಿನಗಳನ್ನು ಅಂದರೆ ಡಿ.6 ಮತ್ತು 7 ರಂದು ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಚರ್ಚೆಗೆ ಕಾಯ್ದಿರಿಸಿದ್ದೇವೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ, ಅವುಗಳ ಪರಿಹಾರಕ್ಕೆ ಪ್ರಯತ್ನಿಸಬೇಕೆಂದು ಕೋರಿರುವುದಾಗಿ ಅವರು ಮಾಹಿತಿ ನೀಡಿದರು.

ಅಧಿವೇಶನಕ್ಕಾಗಿ ಕೋಟ್ಯಂತರ ರೂ. ಸರಕಾರ ಖರ್ಚು ಮಾಡುತ್ತಿದೆ. ಇದಕ್ಕಾದರೂ ಬೆಲೆ ಬೇಡವೇ?. ಬೆಳಗಾವಿ ಧರಣಿ ಹೋರಾಟಕ್ಕಾಗಿಯೇ 80 ಸಾವಿರ ಜನ ಸೇರುತ್ತಾರೆ. 2022ರ ಡಿಸೆಂಬರ್ 19ರಿಂದ 29ರವರೆಗೆ ನಡೆದ ಅಧಿವೇಶನದ ಸಂದರ್ಭದಲ್ಲಿ ಪೊಲೀಸ್ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕೃತ ಮಾಹಿತಿ ಪ್ರಕಾರ, 10 ದಿನಗಳಲ್ಲಿ 102ಕ್ಕೂ ಹೆಚ್ಚು ಸಂಘಟನೆಗಳು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮನವಿ ಸಲ್ಲಿಸಿವೆ.

ಅವುಗಳಲ್ಲಿ ಸುಮಾರು 64ಕ್ಕೂ ಹೆಚ್ಚು ಸಂಘಟನೆಗಳು ಪ್ರತಿಭಟನೆ, ಸತ್ಯಾಗ್ರಹ, ಧರಣಿ ಮುಂತಾದ ಹೋರಾಟಾತ್ಮಕ ಚಟುವಟಿಕೆಗಳನ್ನು ನಡೆಸಿವೆ. ಪ್ರತಿಭಟನೆ ಬೇಡ ಎನ್ನುವುದಿಲ್ಲ. ಅದು ಅವರ ಹಕ್ಕು. ಆದರೆ ಅದಕ್ಕೆ ಸೂಕ್ತ ಪರಿಹಾರ ಕೊಡಿಸುವ ಕೆಲಸ ಆಗಬೇಕು. ಪ್ರತಿಭಟನೆಗಳಾಗದಂತೆ ನೋಡಿಕೊಳ್ಳಬೇಕು ಎಂದು ಹೊರಟ್ಟಿ ನುಡಿದರು.

*ಕನ್ನಡ ಪ್ರಭ -23-11-2023*

# ಬೆಳಗಾವಿ ಅಧಿವೇಶನದಲ್ಲಿ 2 ದಿನ ಉ.ಕ. ಸಮಸ್ಯೆ ಚರ್ಚೆ: ಹೊರಟ್ಟಿ

**ಬೆಂಗಳೂರು:** ಈ ಬಾರಿಯ ಬೆಳಗಾವಿಯಲ್ಲಿ ನಡೆಯುವ ವಿಧಾನಮಂಡಲ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಕುರಿತು ಹೆಚ್ಚಿನ ಚರ್ಚೆಯಾಗಿ, ಪರಿಹಾರ ಕಂಡುಕೊಳ್ಳುವ ಸಲುವಾಗಿ ಅಧಿವೇಶನದ ಎರಡು ಮತ್ತು ಮೂರನೇ ದಿನಗಳನ್ನು ಉತ್ತರಕರ್ನಾಟಕಭಾಗದಸಮಸ್ಯೆಗಳಚರ್ಚೆಗೆಮೀಸಲಿಡಲಾಗುವುದು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು. ವಿಧಾನ ಸೌಧದಲ್ಲಿ ಮಾತನಾಡಿದ ಅವರು, ಪ್ರತಿ ಬಾರಿ ಬೆಳಗಾವಿ ಅಧಿವೇಶನ ನಡೆದಾಗಲೂ ಉತ್ತರ ಕರ್ನಾಟಕ ಭಾಗಕ್ಕೆ ಅನುಕೂಲವಾಗುತ್ತದೆ ಎಂಬ ಭಾವನೆಯಿದೆ. ಆದರೆ, ಸಾಕಷ್ಟು ಸಂದರ್ಭದಲ್ಲಿ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಚರ್ಚೆಯೇ ನಡೆಯುವುದಿಲ್ಲ. ಹೀಗಾಗಿ ಈ ಬಾರಿಯ ಅಧಿವೇಶ ನದಲ್ಲಿ ಉತ್ತರಕರ್ನಾಟಕ ಭಾಗದ ಸಮಸ್ಯೆಗಳ ಚರ್ಚೆಗಾಗಿ 2 ದಿನ ಮೀಸಲಿಡಲಾಗುವುದು. ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆ ನಡೆಸುವ ಉದ್ದೇಶ ಹೊಂದಿರುವ ಸಂಘಟನೆಗಳನ್ನು ಕರೆದು ಈಗಲೇ ಮಾತುಕತೆ ನಡೆಸುವಂತೆ ಪತ್ರ ಬರೆದಿದ್ದೇನೆ ಎಂದರು.

*ವಿಜಯವಾಣಿ -23-11-2023*

# ಹೋರಾಟಕ್ಕಿಂತ ಮುಂಚೆಯೇ ಮಾತುಕತೆ ನಡೆಸಲು ಸಲಹೆ

**ಬೆಂಗಳೂರು:** ಬೆಳಗಾವಿ ಅಧಿವೇಶನ ವೇಳೆ ಜನಸಾಮಾನ್ಯರ ಸಮಸ್ಯೆಗಳ ಕುರಿತು ಅರ್ಥಪೂರ್ಣ ಚರ್ಚೆ ನಡೆದರೆ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರೊಟ್ಟಿಗೆ ಮಾತುಕತೆ ನಡೆಸಲು ಕಂದಾಯ, ಕೃಷಿ, ಶಿಕ್ಷಣ, ಉನ್ನತ ಶಿಕ್ಷಣ ಇಲಾಖೆ ಸಚಿವರಿಗೆ ಪತ್ರ ಬರೆಯಲಾಗಿದೆ. ಈ ಬಗ್ಗೆ ತಾವು ಖುದ್ದಾಗಿ ಮಾತನಾಡುತ್ತಿರುವುದಾಗಿ ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.



» **ನಾಲ್ವರು ಸಚಿವರಿಗೆ ಸಭಾಪತಿ ಪತ್ರ**

ಬೆಳಗಾವಿ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಕಲ್ಪಿಸಿದಂತಾಗಿದೆ ಎಂದರೆ ಅತಿಶಯೋಕ್ತಿ ಎನಿಸಲಾರದು. ಸುವರ್ಣ ವಿಧಾನ ಸೌಧದ ಹೊರಗಡೆ ಧರಣಿ, ಸಮಾವೇಶ, ಸತ್ಯಾಗ್ರಹ ಇನ್ನು ಮುಂತಾದ ಚಟುವಟಿಕೆಗಳಿಂದ ಬೆಳಗಾವಿಯಲ್ಲಿ ಅಧಿವೇಶನ ನಡೆಸುವ ಮೂಲ ಉದ್ದೇಶ ಸಮರ್ಪಕವಾಗಿ ಈಡೇರುತ್ತಿಲ್ಲ ಎಂಬ ವಾದವಿದೆ ಎಂದರು.

2022ರ ಡಿಸೆಂಬರ್‌ನಲ್ಲಿ ನಡೆದ ಅಧಿವೇಶನದ ಸಂದರ್ಭದಲ್ಲಿ 10 ದಿನಗಳಲ್ಲಿ 102ಕ್ಕೂ ಹೆಚ್ಚು ಸಂಘಟನೆಗಳು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮನವಿ ಸಲ್ಲಿಸಿದ್ದವು. ಅವುಗಳಲ್ಲಿ ಸುಮಾರು 64ಕ್ಕೂ ಹೆಚ್ಚು ಸಂಘಟನೆಗಳು ಪ್ರತಿಭಟನೆ, ಸತ್ಯಾಗ್ರಹ, ಧರಣಿ ನಡೆಸಿವೆ. ಈ ಪ್ರತಿಭಟನೆ- ಸತ್ಯಾಗ್ರಹಗಳಲ್ಲಿ ಸುಮಾರು 65ರಿಂದ 80 ಸಾವಿರ ಮಂದಿ ಪಾಲ್ಗೊಂಡಿದ್ದರು. ಈ ಎಲ್ಲದಕ್ಕೂ ಸರ್ಕಾರದಿಂದ ಟೆಂಟ್ ಸೇರಿ ಇತರೆ ಸೌಲಭ್ಯ ಕಲ್ಪಿಸಲಾಗಿತ್ತು. ಅಲ್ಲದೇ ಶಾಸಕರು ಅಧಿವೇಶನದಲ್ಲಿ ಸಂಪೂರ್ಣ ಹಾಗೂ ಕ್ರಿಯಾಶೀಲರಾಗಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

ಉದಯವಾಣಿ -23-11-2023

# ಅಧಿವೇಶನದಲ್ಲಿ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾಗಲಿ: ಹೊರಟ್ಟಿ

ಬೆಂಗಳೂರು: ಬೆಳಗಾವಿ ಅಧಿವೇಶನದಲ್ಲಿ ಅರ್ಥಪೂರ್ಣ ಚರ್ಚೆ ನಡೆಯಬೇಕಿದ್ದರೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾಗಬೇಕು. ಆಗ ಮಾತ್ರ ಉತ್ತರ ಕರ್ನಾಟಕ ಭಾಗದಲ್ಲಿ ಅಧಿವೇಶನ ನಡೆಸಿದ್ದು ಸಾರ್ಥಕವಾಗುತ್ತದೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ. ಸುದ್ದಿಗೋಷ್ಠಿಯಲ್ಲಿ




ಮಾತನಾಡಿದ ಅವರು, ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ತಡೆಯಲು ಆಯಾ ಸಂಘಟನೆಗಳ ಮುಖಂಡರೊಟ್ಟಿಗೆ ಸರ್ಕಾರ ಮಾತುಕತೆ ನಡೆಸಬೇಕು. ಈ ಸಂಬಂಧ ಕಂದಾಯ, ಕೃಷಿ, ಶಿಕ್ಷಣ, ಉನ್ನತ ಶಿಕ್ಷಣ ಇಲಾಖೆ ಸಚಿವರಿಗೆ ಪತ್ರ ಬರೆಯಲಾಗಿದೆ ಎಂದು ಹೇಳಿದರು. ಬೆಳಗಾವಿಯ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಎಂಬ ವಾತಾವರಣ ಸೃಷ್ಟಿಯಾಗಿದೆ. ಇದರಿಂದ ಅಧಿವೇಶನ ನಡೆಸುವ ಮೂಲ ಉದ್ದೇಶ ಈಡೇರುತ್ತಿಲ್ಲ, ಈ ವರೆಗೆ ನಡೆದ ಹೋರಾಟಗಳಲ್ಲಿ ಶೇ.10ರಷ್ಟೂ ಬಗೆಹರಿದಿಲ್ಲ, ಕಳೆದ ಅಧಿವೇಶನದ ಸಂದರ್ಭದಲ್ಲಿ 10 ದಿನಗಳಲ್ಲಿ 102ಕ್ಕೂ ಹೆಚ್ಚು ಸಂಘಟನೆಗಳು ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಮನವಿ ಸಲ್ಲಿಸಿದ್ದವು. ಅವುಗಳಲ್ಲಿ ಸುಮಾರು 64 ಕ್ಕೂ ಹೆಚ್ಚು ಸಂಘಟನೆಗಳು ಪ್ರತಿಭಟನೆ ನಡೆಸಿವೆ. ಸುಮಾರು 65,000 ದಿಂದ 80,000 ಜನರು ಇದರಲ್ಲಿ ಪಾಲ್ಗೊಂಡಿದ್ದರು. ಇದರಿಂದಾಗಿ ಶಾಸಕರು ಅಧಿವೇಶನದಲ್ಲಿ ಸಂಪೂರ್ಣವಾಗಿ ಹಾಗೂ ಕ್ರಿಯಾಶೀಲರಾಗಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಂಯುಕ್ತ ಕರ್ನಾಟಕ -23-11-2023

# ಅಧಿವೇಶನದಲ್ಲಿ ಉ.ಕ ಸಮಸ್ಯೆಗಳ ಚರ್ಚೆ

**ಬೆಂಗಳೂರು:** ಪ್ರತಿಭಟನೆ ಸಂವಿಧಾನಾತ್ಮಕ ಹಕ್ಕು ನಿಜ. ಆದರೆ ಬೆಳಗಾವಿಯಲ್ಲಿ 10 ದಿನಗಳ ಕಾಲ ನಡೆಯಲಿರುವ ವಿಧಾನಮಂಡಲ ಅಧಿವೇಶನಕ್ಕೆ ಪ್ರತಿಭಟನೆಗಳ ಬಿಸಿ ತಟ್ಟುವುದು ಬೇಡ ಎಂದು ಸಲಹೆ ನೀಡಿರುವ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸರ್ಕಾರ ಈ ಬಗ್ಗೆ ಎಚ್ಚೆತ್ತು ಪ್ರತಿಭಟನೆಗೆ ಮುಂದಾಗಿರುವ ವಿವಿಧ ಸಂಘಟನೆಗಳ ಜೊತೆ ಸಮಾಲೋಚಿಸಿ ಪರಿಹಾರ ಒದಗಿಸುವಂತೆ ಖುದ್ದು ಪತ್ರ ಬರೆದಿದ್ದಾರೆ. ವಿಧಾನಸೌಧದ ತಮ್ಮ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಅವರು, 2022ರ ಡಿಸೆಂಬರ್ 19 ರಿಂದ 29ರವರೆಗೆ ನಡೆದ ಅಧಿವೇಶನದ ವೇಳೆ 10 ದಿನಗಳಲ್ಲಿ 102ಕ್ಕೂ ಅಧಿಕ ಸಂಘಟನೆಗಳು ಬೇಡಿಕೆ ಈಡೇರಿಕೆಗೆ ಮನವಿ ಸಲ್ಲಿಸಿದ್ದವು. ಅದರಲ್ಲಿ 64 ಸಂಘಟನೆಗಳು ಪ್ರತಿಭಟನೆ, ಸತ್ಯಾಗ್ರಹ, ಧರಣಿ ಮೊದಲಾದ ರೀತಿಯಲ್ಲಿ ಹೋರಾಟಾತ್ಮಕ ಚಟುವಟಿಕೆ ನಡೆಸಿದ್ದವು. ಈ ಎಲ್ಲಾ ಪ್ರತಿಭಟನೆಗಳಲ್ಲಿ ಸುಮಾರು 65 ರಿಂದ 80ಸಾವಿರ ಜನರು ಪಾಲ್ಗೊಂಡಿದ್ದರು. ಇದು ಸಹಜವಾಗಿಯೇ ಸುಗಮ ಕಲಾಪಕ್ಕೆ ಧಕ್ಕೆಯಾಗುತ್ತದೆ. ಹಾಗಾಗಿ ಈ ವರ್ಷ ಇಂತಹ ಪ್ರತಿಭಟನೆಗಳಿಗೆ ಅವಕಾಶವಾಗದಂತೆ ಸರ್ಕಾರ ಮೊದಲೇ ಸಂಘಟನೆಗಳ ಜೊತೆ ಬೇಡಿಕೆಗಳ ಬಗ್ಗೆ ವ್ಯವಹರಿಸಿ ಪರಿಹಾರ ಕಲ್ಪಿಸುವಂತೆ ಸಲಹೆ ನೀಡಿರುವುದಾಗಿ ವಿವರಿಸಿದರು. ಕರ್ನಾಟಕ ವಿಧಾನ ಮಂಡಲದ 151ನೇ ಅಧಿವೇಶನವ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿ.4 ರಿಂದ 15ರವರೆಗೆ ನಡೆಯಲಿದೆ. ಇದರಲ್ಲಿ 2 ದಿನಗಳ ಕಾಲ ಉತ್ತರಕರ್ನಾಟಕದ ವಿಷಯಗಳ ಬಗ್ಗೆಯೇ ಚರ್ಚೆಗೆ ಅವಕಾಶ ಕಲ್ಪಿಸಲಾಗುವುದು. ಬೆಳಗಾವಿಯ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಕಲ್ಪಿಸಿದಂತಾಗಿದೆ ಎನ್ನುವುದು ಹಲವರ ಅಭಿಪ್ರಾಯವಾಗಿದ್ದು, ಈ ಬಾರಿ ಇದಕ್ಕೆ ಕಡಿವಾಣ ಬೀಳಬೇಕಿದೆ ಎಂದ ಸಭಾಪತಿ.ಸುವರ್ಣಸೌಧದ ಹೊರಗಡೆ ಚಳವಳಿ ವೇಳೆ ಶಾಸಕರು ಪಾಲ್ಗೊಂಡು ತಮ್ಮ ಅನಿಸಿಕೆ ವ್ಯಕ್ತಪಡಿಸುತ್ತಾರೆ. ಹಾಗಾಗಿ ಅಧಿವೇಶನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅಭಿಪ್ರಾಯಪಟ್ಟರು.



# ಪ್ರತಿಭಟನೆಗಳ ಸಂಖ್ಯೆ ತಗ್ಗಿದರೆ ಅಧಿವೇಶನದಲ್ಲಿ ಅರ್ಥಪೂರ್ಣ ಚರ್ಚೆ

## ಬಸವರಾಜ ಹೊರಟ್ಟಿ



ಬೆಂಗಳೂರು, ನ.22: ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾಗುವ ಜತೆಗೆ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದಕ್ಕೆ ಸಾರ್ಥಕವಾಗುತ್ತದೆ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಬುಧವಾರ ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.4ರಿಂದ ಬೆಳಗಾವಿ ಅಧಿವೇಶನ ಆರಂಭವಾಗುತ್ತಿದೆ. ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡುವಂತೆ ಮುಖ್ಯಮಂತ್ರಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.

ಪ್ರತೀ ಬಾರಿ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನಡೆಯುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಉತ್ತರ ಕರ್ನಾಟಕವೂ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ರೈತ ಸಂಘ, ಶಿಕ್ಷಕರ ಸಂಘ, ನೌಕರರ ಸಂಘ, ಕನ್ನಡ ಪರ ಸಂಘಟನೆಗಳು ಸೇರಿದಂತೆ ನೂರಾರು ಸಂಘ ಸಂಸ್ಥೆಗಳು ತಮ್ಮ ಹಲವಾರು ಸಮಸ್ಯೆ, ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ನಿರಂತರವಾಗಿ ಧರಣಿ, ಸತ್ಯಾಗ್ರಹ, ಪ್ರತಿಭಟನೆ ನಡೆಸುವುದು ಸರ್ವೇ ಸಾಮಾನ್ಯವಾಗಿದೆ.

ಒಂದು ಅರ್ಥದಲ್ಲಿ ಬೆಳಗಾವಿಯ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಕಲ್ಪಿಸಿದಂತಾಗಿದೆ ಎಂದರೆ ಅತಿಶಯೋಕ್ತಿ ಎನಿಸಲಾರದು ಎನ್ನುವುದು ಹಲವರ ಅಭಿಪ್ರಾಯವಾಗಿದ್ದು, ಬಹಳಷ್ಟು ಜನ ಈ ರೀತಿಯ ಭಾವನೆಯನ್ನು ನನ್ನ ಮುಂದೆ ವ್ಯಕ್ತಪಡಿಸಿದ್ದಾರೆ ಎಂದು ಅವರು ಉಲ್ಲೇಖಿಸಿದರು.

43 ವರ್ಷಗಳಿಂದ ಪರಿಷತ್ತಿನ ಸದಸ್ಯನಾಗಿ ಹಾಗೂ ಮೂರನೇ ಬಾರಿ ಸಭಾಪತಿಯಾಗಿ ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಕೆಲಸ ನಿರ್ವಹಿಸುತ್ತಿದ್ದೇನೆ. ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವ ಹಿನ್ನೆಲೆಯಲ್ಲಿ ಸರಕಾರಕ್ಕೆ ಸಲಹೆ ನೀಡಬಯಸುವುದು ಸೂಕ್ತ ಎಂದು ನಾನು ಭಾವಿಸುತ್ತೇನೆ. ಈ ಕುರಿತಂತೆ ಮುಖ್ಯಮಂತ್ರಿಗೆ ಹಾಗೂ ಕೃಷಿ, ಕಂದಾಯ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಿಗೆ ಪತ್ರ ಬರೆದು ನನ್ನ ಭಾವನೆಗಳನ್ನು ಹಂಚಿಕೊಂಡಿದ್ದೇನೆ ಎಂದು ತಿಳಿಸಿದರು.

ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ, ಅವುಗಳ ಪರಿಹಾರಕ್ಕೆ ಪ್ರಯತ್ನಿಸಬೇಕೆಂದು ಕೋರಿರುವುದಾಗಿ ಅವರು ಮಾಹಿತಿ ನೀಡಿದರು.

ಅಧಿವೇಶನಕ್ಕಾಗಿ ಕೋಟ್ಯಂತರ ರೂ. ಸರಕಾರ ಖರ್ಚು ಮಾಡುತ್ತಿದೆ. ಇದಕ್ಕಾದರೂ ಬೆಲೆ ಬೇಡವೇ?. ಬೆಳಗಾವಿ ಧರಣಿ ಹೋರಾಟಕ್ಕಾಗಿಯೇ 80 ಸಾವಿರ ಜನ ಸೇರುತ್ತಾರೆ. 2022ರ ಡಿಸೆಂಬರ್ 19ರಿಂದ 29ರವರೆಗೆ ನಡೆದ ಅಧಿವೇಶನದ ಸಂದರ್ಭದಲ್ಲಿ ಪೊಲೀಸ್ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕೃತ ಮಾಹಿತಿ ಪ್ರಕಾರ, 10 ದಿನಗಳಲ್ಲಿ 102ಕ್ಕೂ ಹೆಚ್ಚು ಸಂಘಟನೆಗಳು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮನವಿ ಸಲ್ಲಿಸಿವೆ.


ಅವುಗಳಲ್ಲಿ ಸುಮಾರು 64ಕ್ಕೂ ಹೆಚ್ಚು ಸಂಘಟನೆಗಳು ಪ್ರತಿಭಟನೆ, ಸತ್ಯಾಗ್ರಹ, ಧರಣಿ ಮುಂತಾದ ಹೋರಾಟಾತ್ಮಕ ಚಟುವಟಿಕೆಗಳನ್ನು ನಡೆಸಿವೆ. ಪ್ರತಿಭಟನೆ ಬೇಡ ಎನ್ನುವುದಿಲ್ಲ. ಅದು ಅವರ ಹಕ್ಕು. ಆದರೆ ಅದಕ್ಕೆ ಸೂಕ್ತ ಪರಿಹಾರ ಕೊಡಿಸುವ ಕೆಲಸ ಆಗಬೇಕು. ಪ್ರತಿಭಟನೆಗಳಾಗದಂತೆ ನೋಡಿಕೊಳ್ಳಬೇಕು ಎಂದು ಹೊರಟ್ಟಿ ನುಡಿದರು.

### ಎರಡು ದಿನ ಉ.ಕರ್ನಾಟಕ ಕುರಿತು ಚರ್ಚೆ

ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ಕಲಾಪದ ಎರಡು ದಿನಗಳನ್ನು ಅಂದರೆ ಡಿ.6 ಮತ್ತು 7 ರಂದು ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಚರ್ಚೆಗೆ ಕಾಯ್ದಿರಿಸಿದ್ದೇವೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

# ಪ್ರತಿಭಟನೆ ಸಂಖ್ಯೆ ಇಳಿಮುಖಕ್ಕೆ ಸಲಹೆ

ಹುಬ್ಬಳ್ಳಿ: ಬೆಳಗಾವಿ ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ನಡೆಯುವಂತಾಗಲು ಗಮನಹರಿಸಬೇಕು. ಪ್ರತಿಭಟನೆಗಳ ಸಂಖ್ಯೆ ಇಳಿಮುಖಗೊಳಿಸಿ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಅರ್ಥಪೂರ್ಣವಾದ ಸಲಹೆ ನೀಡಿದ್ದಾರೆ.




**ಡಿ. 4ರಿಂದ ಸುವರ್ಣ ಸೌಧದಲ್ಲಿ ಅಧಿವೇಶನ**

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4 ರಿಂದ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅವರು ಸರ್ಕಾರಕ್ಕೆ ಪತ್ರ ಬರೆದು ಕೆಲ ಸಲಹೆ–ಸೂಚನೆ ನೀಡಿದ್ದಾರೆ.

ವಿವಿಧ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪತ್ರದಲ್ಲಿ ಸಭಾಪತಿ ಹೇಳಿದ್ದಾರೆ.

ಪ್ರಮುಖ ಸುದ್ದಿಗಳು

# ಅರ್ಥಪೂರ್ಣ ಅಧಿವೇಶನ ನಡೆಸಲು ಸಿಎಂಗೆ ಸಲಹೆ




ಬೆಂಗಳೂರು, ನ. 21- ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4ರಿಂದ 10 ದಿನಗಳ ಕಾಲ ನಡೆಯುವ ಚಳಿಗಾಲದ ಅಧಿವೇಶನವನ್ನು ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರಿಗೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಸಲಹೆ ನೀಡಿದ್ದಾರೆ.

...ಪುಟ 2

# ಅಧಿವೇಶನ ಸಂದರ್ಭದಲ್ಲಿ ಧರಣಿ, ಸತ್ಯಾಗ್ರಹಕ್ಕೆ ಕಡಿವಾಣ

## ಸರ್ಕಾರಕ್ಕೆ ಪತ್ರ ಬರೆದ ಸಭಾಪತಿ ಬಸವರಾಜ ಹೊರಟ್ಟಿ



**ಬೆಂಗಳೂರು:** ಬೆಳಗಾವಿಯಲ್ಲಿ ಡಿ. 4 ರಿಂದ ಆರಂಭವಾಗಲಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ, ಸತ್ಯಾಗ್ರಹಗಳನ್ನು ಇಳಿಮುಖ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

ಬೆಳಗಾವಿಯ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳು ನಡೆಯುತ್ತಿವೆ. ಇದರಿಂದ ಅಧಿವೇಶನದ ಅತ್ಯಮೂಲ್ಯವಾದ ಸಮಯ ವ್ಯರ್ಥವಾಗುತ್ತಿದೆ. ಹಾಗಾಗಿ ಅಧಿವೇಶನವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವಂತೆ

2ನೇ ಪುಟಕ್ಕೆ

ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಚರ್ಚೆಗಳು ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕದ ಭಾಗದಲ್ಲಿ ಅಧಿವೇಶನ ಸಾರ್ಥಕವಾಗಿ ನಡೆದು ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಪತ್ರದಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಅಧಿವೇಶನ: ಪ್ರತಿಭಟನೆಗಳ ಇಳಿಮುಖಕ್ಕೆ ಮುಖ್ಯಮಂತ್ರಿಗೆ, ಸಭಾಪತಿ ಬಸವರಾಜ ಹೊರಟ್ಟಿ ಸಲಹಾ ಪತ್ರ

**ಮೊದಲನೇ ಪುಟದಿಂದ...**

ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಪತ್ರದ ಮೂಲಕ ಕೋರಿದ್ದಾರೆ ಎಂದು ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್ ಹೊರಟ್ಟಿ ಅವರು ಪತ್ರದಲ್ಲಿ ಸಲಹೆ ನೀಡಿರುತ್ತಾರೆ ಎಂದು ಸಭಾಪತಿಯವರ ಕಚೇರಿ ಪ್ರಕಟಣೆ ತಿಳಿಸಿದೆ.

# ಬೆಳಗಾವಿ ಅಧಿವೇಶನ: ಪ್ರತಿಭಟನೆಗಳ ಇಳಿಮುಖಕ್ಕೆ

# ಮುಖ್ಯಮಂತ್ರಿಗೆ, ಸಭಾಪತಿ ಬಸವರಾಜ ಹೊರಟ್ಟಿ ಸಲಹಾ ಪತ್ರ

**ಸಂಜೆ ಎಕ್ಸ್‌ಪ್ರೆಸ್ ಸುದ್ದಿ, ಬೆಂಗಳೂರು, ನ 21:** ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023 ರಿಂದ ಡಿಸೆಂಬರ್ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನವನ್ನು ರಾಜ್ಯ ಸರ್ಕಾರ ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಅಧಿವೇಶನದ ಅತ್ಯಮೂಲ್ಯವಾದ  ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ



ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಪತ್ರದಲ್ಲಿ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್.ಹೊರಟ್ಟಿ ಅವರು ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ → 2


# ಬೆಳಗಾವಿ ಅಧಿವೇಶನ ಪ್ರತಿಭಟನೆ, ಧರಣಿಗಳಿಗೆ ಸೀಮಿತವಾಗಬಾರದು : ಸಭಾಪತಿ ಹೊರಟ್ಟಿ

**ಬೆಂಗಳೂರು,ನ. 22:** ಡಿಸೆಂಬರ್ 4 ರಿಂದ ಬೆಳಗಾವಿ ಅಧಿವೇಶನ ಆರಂಭವಾಗುತ್ತಿದ್ದು, ಈ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ ಸಾರ್ಥಕವಾಗುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್.ಹೊರಟ್ಟಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಬುಧವಾರ ಸುದ್ದಿಗೋಷ್ಠಿ ಯಲ್ಲಿ ಮಾತನಾಡಿದ ಅವರು, ಇದರಿಂದ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎನ್ನುವುದು ನನ್ನ ಅನಿಸಿಕೆ ಎಂದರು.

ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.

ಪ್ರತಿಬಾರಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಉತ್ತರ ಕರ್ನಾಟಕವೂ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ರೈತಸಂಘ, ಶಿಕ್ಷಕರಸಂಘ, ನೌಕರರಸಂಘ, ಕನ್ನಡ ಪರ ಸಂಘಟನೆಗಳು ಸೇರಿದಂತೆ ನೂರಾರು ಸಂಘ-ಸಂಸ್ಥೆಗಳು ತಮ್ಮ ಹಲವಾರು ಸಮಸ್ಯೆ, ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸುವರ್ಣ ವಿಧಾನ ಸೌಧದ ಮುಂಭಾಗದಲ್ಲಿ ನಿರಂತರವಾಗಿ ಧರಣಿ, ಸತ್ಯಾಗ್ರಹ, ಪ್ರತಿಭಟನೆ ನಡೆಸುವುದು ಸರ್ವೇಸಾಮಾನ್ಯವಾಗಿದೆ. ಒಂದು ಅರ್ಥದಲ್ಲಿ ಬೆಳಗಾವಿಯ ಅಧಿವೇಶನ ಎಂದರೆ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವೇದಿಕೆ ಕಲ್ಪಿಸಿದಂತಾಗಿದೆ ಎಂದರೆ ಅತಿಶಯೋಕ್ತಿ ಎನಿಸಲಾರದು ಎನ್ನುವುದು ಹಲವರ ಅಭಿಪ್ರಾಯವಾಗಿದ್ದು, ಬಹಳಷ್ಟು ಜನ ಈ ರೀತಿಯ ಭಾವನೆಯನ್ನು ನನ್ನ ಮುಂದೆ ವ್ಯಕ್ತಪಡಿಸಿದ್ದಾರೆ. ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸಲಾಗುವ ಅಧಿವೇಶನದ ಸಂದರ್ಭದಲ್ಲಿ ವಿಧಾನಸೌಧದ ಹೊರಗಡೆ ಧರಣಿ, ಸಮಾವೇಶ, ಸತ್ಯಾಗ್ರಹ ಇನ್ನು ಮುಂತಾದ ಚಟುವಟಿಕೆಗಳಿಂದ ಬೆಳಗಾವಿಯಲ್ಲಿ ಅಧಿವೇಶನ ನಡೆಸುವ ಮೂಲ ಉದ್ದೇಶ ಸಮರ್ಪಕವಾಗಿ ಈಡೇರುತ್ತಿಲ್ಲ ಎನ್ನುವುದು ಹಲವು ರಾಜಕೀಯ ವಿಶ್ಲೇಷಕರ ಅಭಿಪ್ರಾಯವಾಗಿದೆ ಎಂದರು.



*ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.*

ಕಳೆದ 43 ವರ್ಷಗಳಿಂದ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯನಾಗಿ ಹಾಗೂ ಮೂರನೇ ಬಾರಿ ವಿಧಾನಪರಿಷತ್ತಿನ ಸಭಾಪತಿಯಾಗಿ ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಕೆಲಸ ನಿರ್ವಹಿಸುತ್ತಿರುವ ನಾನು ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವ ಹಿನ್ನಲೆಯಲ್ಲಿ ಸರ್ಕಾರಕ್ಕೆ ಸಲಹೆ ನೀಡಬಯಸುವುದು ಸೂಕ್ತ ಎಂದು ನಾನು ಭಾವಿಸಿ ಮುಖ್ಯಮಂತ್ರಿಗಳಿಗೆ ಹಾಗೂ ಕೃಷಿ, ಕಂದಾಯ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಿಗೆ ಪತ್ರ ಬರೆದು ನನ್ನ ಭಾವನೆಗಳನ್ನು ಹಂಚಿಕೊಂಡಿದ್ದೇನೆ. ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸಬೇಕೆಂದು ಕೋರಿರುವುದಾಗಿ ತಿಳಿಸಿದರು.

ಬೆಳಗಾವಿಯಲ್ಲಿ ನಡೆಯುವ ಅಧಿವೇಶನ ಕಲಾಪದ ಎರಡು ದಿನಗಳನ್ನು ಅಂದರೆ ಡಿ. 6 ಮತ್ತು 7 ರಂದು ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಚರ್ಚೆಗೆ ಕಾಯ್ದಿರಿಸಿದ್ದೇವೆ ಎಂದು ಹೇಳಿದರು.

ಅಧಿವೇಶನಕ್ಕಾಗಿ ಕೋಟ್ಯಂತರ ರೂ. ಹಣವನ್ನು ಸರ್ಕಾರ ಖರ್ಚು ಮಾಡುತ್ತಿದೆ. ಇದಕ್ಕಾದರೂ ಬೆಲೆ ಬೇಡವೇ? . ಬೆಳಗಾವಿ ಧರಣಿ ಹೋರಾಟಕ್ಕಾಗಿಯೇ 80 ಸಾವಿರ ಜನ ಸೇರುತ್ತಾರೆ. ಕಳೆದ ವರ್ಷ 2022ರ ಡಿಸೆಂಬರ್ 19 ರಿಂದ 29 ರ ವರೆಗೆ ನಡೆದ ಅಧಿವೇಶನದ ಸಂದರ್ಭದಲ್ಲಿ ಪೊಲೀಸ್ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕೃತ ಮಾಹಿತಿ ಪ್ರಕಾರ 10 ದಿನಗಳಲ್ಲಿ 102ಕ್ಕೂ ಹೆಚ್ಚು ಸಂಘಟನೆಗಳು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮನವಿ ಸಲ್ಲಿಸಿವೆ. ಅವುಗಳಲ್ಲಿ ಸುಮಾರು 64 ಕ್ಕೂ ಹೆಚ್ಚು ಸಂಘಟನೆಗಳು ಪ್ರತಿಭಟನೆ, ಸತ್ಯಾಗ್ರಹ, ಧರಣಿ ಮುಂತಾದ ಹೋರಾಟಾತ್ಮಕ ಚಟುವಟಿಕೆಗಳನ್ನು ನಡೆಸಿವೆ. ಪ್ರತಿಭಟನೆ ನಡೆಯುವುದು ಬೇಡ ಎನ್ನುವುದಿಲ್ಲ. ಅದು ಅವರ ಹಕ್ಕು. ಆದರೆ ಅದಕ್ಕೆ ಸೂಕ್ತ ಪರಿಹಾರ ಕೊಡಿಸುವ ಕೆಲಸ ಆಗಬೇಕು. ಪ್ರತಿಭಟನೆಗಳಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

### ಪ್ರತಿವರ್ಷ ನೂರಾರು ಸಂಘಟನೆಗಳ ಪ್ರತಿಭಟನೆಯಿಂದ ಸದನಕ್ಕೆ ಕಪ್ಪುಚುಕ್ಕೆ

# ಸಭಾಪತಿ ಹೊರಟ್ಟಿಯಿಂದ ಮುಖ್ಯಮಂತ್ರಿಗೆ ಪತ್ರ

ಬೆಂಗಳೂರು: ಪ್ರತಿಬಾರಿ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆದಾಗಲೂ ಪ್ರತಿನಿತ್ಯ ಕನಿಷ್ಠ ನೂರರಿಂದ 150 ಪ್ರತಿಭಟನೆಗಳು ನಡೆಯುತ್ತವೆ. ವರ್ಷಕ್ಕೊಮ್ಮೆ ಬೆಳಗಾವಿಯಲ್ಲಿ ನಡೆಯುವ ಅಧಿವೇಶನಕ್ಕೆ ಈ ರೀತಿಯ ಪ್ರತಿಭಟನೆಗಳು ಸರಿಯಲ್ಲ. ಆದ್ದರಿಂದ ಪ್ರತಿಭಟನೆಗಳಿಗೆ ಬ್ರೇಕ್ ಹಾಕುವಂತೆ ಸರಕಾರಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ನೀಡಿದ್ದಾರೆ.


ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರಾದ ಕೃಷ್ಣಬೈರೇಗೌಡ, ಚಲುವರಾಯಸ್ವಾಮಿ, ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕ ಪತ್ರ ಬರೆದಿರುವ ಅವರು, ಅಧಿವೇಶನದ ಅತ್ಯಮೂಲ್ಯ ಸಮಯ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ. ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಿಕ್ಷಣ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದೆ. ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾಗಿ, ಸದನದೊಳಗೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆ ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು ಸಾರ್ಥಕವಾಗುತ್ತದೆ. ಇದರಿಂದ ಸರಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

**ಅಧಿವೇಶನಕ್ಕೂ ಮುನ್ನ ಪರಿಹಾರಕ್ಕೆ ಪ್ರಯತ್ನಿಸಿ:** ಅಧಿವೇಶನ ಆರಂಭಗೊಳ್ಳುವ ಮೊದಲೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಬಗ್ಗೆ ಚರ್ಚಿಸಿ, ಪರಿಹಾರಕ್ಕೆ ಪ್ರಯತ್ನಿಸಬೇಕು. ಆ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ, ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಚಿವ ಸಂಪುಟದ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪತ್ರದಲ್ಲಿ ಕೋರಿದ್ದಾರೆ.

## ಬೆಳಗಾವಿ ಅಧಿವೇಶನ

# ಪ್ರತಿಭಟನೆಗಳ ಸಂಖ್ಯೆ ಇಳಿಮುಖಕ್ಕೆ ಶೀಘ್ರವೇ ಪರಿಹಾರ ಚರ್ಚಿಸಿ: ಬಸವರಾಜ ಹೊರಟ್ಟಿ



**ಹುಬ್ಬಳ್ಳಿ:** ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023 ರಿಂದ ಡಿಸೆಂಬರ್ 15ರ ವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನವನ್ನು ರಾಜ್ಯ ಸರ್ಕಾರ ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರ ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಪತ್ರದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್.ಹೊರಟ್ಟಿ ಅವರು ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸದರಿ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಪತ್ರದ ಮೂಲಕ ಕೋರಿದ್ದಾರೆ.

# ಸದನದ ಹೊರಗಿನ ಪ್ರತಿಭಟನೆಗಳನ್ನು ತಗ್ಗಿಸಿ

■ **ಅಧಿವೇಶನಕ್ಕೂ ಮೊದಲೇ ಚರ್ಚಿಸಲು ಸಚಿವರಿಗೆ ನಿರ್ದೇಶನ ನೀಡಿ: ಸಿಎಂಗೆ ಹೊರಟ್ಟಿ ಸಲಹೆ**

**ಬೆಂಗಳೂರು:** ಅಧಿವೇಶನದಲ್ಲಿ ಜನ ಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳು ಚರ್ಚೆಯಾಗಿ ಪರಿಹಾರ ಆಗಬೇಕಿದ್ದರೆ, ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳು ಹೊರಗೆ ಪ್ರತಿಭಟಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಅಧಿವೇಶನದ ಅತ್ಯಮೂಲ್ಯ ಸಮಯವು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಬೆಳಗಾವಿಯ ಸುವರ್ಣ ಸೌದಲ್ಲಿ ನಡೆಯುವ ಅಧಿವೇಶನವು ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸುವಂತೆ ಸರ್ಕಾರಕ್ಕೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ನೀಡಿದ್ದಾರೆ.



ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಸಚಿವರನೇಕರಿಗೆ ಪ್ರತ್ಯೇಕ ಪತ್ರ ಬರೆದಿರುವ ಅವರು, ಡಿ.4 ರಿಂದ 15ರವರೆಗೆ ಬೆಳಗಾವಿಯ ಸುವರ್ಣ ಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಸಲುನಿರ್ಧರಿಸಲಾಗಿದೆ. ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿ ವಿವಿಧ. ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಅಧಿವೇಶನಕ್ಕೂ ಮುನ್ನ ಸಂಬಂಧಿಸಿದ ಸಚಿವರು ಸಂಬಂಧಪಟ್ಟ ಸಂಘಟನೆಗಳೊಂದಿಗೆ ಮಾತುಕತೆ ನಡೆಸಿ, ಅಧಿವೇಶನದ ವೇಳೆಗೆ ಪ್ರತಿಭಟನೆಗಳು ನಡೆಯದಂತೆ ನೋಡಿಕೊಳ್ಳಬೇಕು. ಈ ಬಗ್ಗೆ ಸಚಿವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಸಿಎಂಗೆ ಬರೆದ ಪತ್ರದಲ್ಲಿಹೇಳಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ಸಲಹೆ ನೀಡಿದ್ದಾರೆ.

ಸಿಎಂ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೂ ಪ್ರತ್ಯೇಕ ಪತ್ರಗಳನ್ನು ಬರೆದಿದ್ದಾರೆ.

# ಅಧಿವೇಶನ ವೇಳೆ ಪ್ರತಿಭಟನೆಗಳಿಗೆ ಬ್ರೇಕ್ ಹಾಕುವಂತೆ ಸಿಎಂಗೆ ಪತ್ರ

ಬೆಂಗಳೂರು: ಬೆಳಗಾವಿಯಲ್ಲಿ ನಡೆಯಲಿರುವ ಅಧಿವೇಶನ ಸಂದರ್ಭದಲ್ಲಿ ಯಾವುದೇ ಪ್ರತಿಭಟನೆಗಳಿಗೆ ಅವಕಾಶ ನೀಡದೆ, ಪ್ರತಿಭಟನೆಗಳಿಗೆ ಸಂಪೂರ್ಣ ಬ್ರೇಕ್ ಹಾಕುವಂತೆ ಸಭಾಪತಿ ಬಸವರಾಜ್ ಹೊರಟ್ಟಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರಬರೆದು ಸಲಹೆ ನೀಡಿದ್ದಾರೆ.


ಪ್ರತಿವರ್ಷ ಬೆಳಗಾವಿಯಲ್ಲಿ ಹತ್ತು ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಯುತ್ತದೆ. ಆದರೆ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆ ಸರ್ವೇ ಸಾಮಾನ್ಯ ಎಂಬಂತಾಗಿದೆ. ಇದರಿಂದಾಗಿ ಇದರಿಂದಾಗಿ ಅಧಿವೇಶನ ಅರ್ಥ ಕಳೆದುಕೊಳ್ಳುತ್ತಿದೆ. ಈ ಬಾರಿಯಾದರೂ ಪ್ರತಿಭಟನೆಗಳು ನಡೆಯದಂತೆ ನೋಡಿಕೊಳ್ಳಿ. ಅಧಿವೇಶನ ಆರಂಭಕ್ಕೂ ಮುನ್ನ ವಿವಿಧ ಸಂಘಟನೆಗಳ ಜೊತೆ ಸಭೆ ಮಾಡಿ. ಅವರ ಬೇಡಿಕೆಗಳ ಬಗ್ಗೆ ಚರ್ಚೆ ಮಾಡಿ ಪರಿಹಾರಕ್ಕೆ ಕ್ರಮ ತೆಗೆದುಕೊಳ್ಳಿ. ಆ ಮೂಲಕ ಪ್ರತಿಭಟನೆಗಳು ನಡೆಯದಂತೆ ನೋಡಿಕೊಳ್ಳಿ ಎಂದು ಸರ್ಕಾರಕ್ಕೆ ಸಲಹೆ ನೀಡಿರುವ ಸಭಾಪತಿ ಬಸವರಾಜ್ ಹೊರಟ್ಟಿ, ಈಗಾಗಲೇ ಬೆಳಗಾವಿ ಅಧಿವೇಶನದಲ್ಲಿ ಸರ್ಕಾರವನ್ನು ಕಟ್ಟಿಹಾಕಲು ಮುಂದಾಗಿರುವ ಪ್ರತಿಪಕ್ಷಗಳು ಹಾಗೂ ವಿವಿಧ ಸಂಘಟನೆಗಳು. ಬರ ಪರಿಹಾರ, ಕಾವೇರಿ ನೀರು ವಿವಾದ, ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ತಲುಪದಿರುವುದು ಸೇರಿದಂತೆ ಹಲವು ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಪ್ರತಿಭಟನೆಗೆ ಮುಂದಾಗಿರುವ ಸಂಘಟನೆಗಳು. ಅಧಿವೇಶನಕ್ಕೆ ಮೊದಲೇ ಪರಿಹಾರ ಕಂಡುಕೊಳ್ಳದಿದ್ದರೆ ಪ್ರತಿಭಟನೆಗಳು ನಡೆಯುವುದು ನಿಶ್ಚಿತವಾಗಿದೆ.

ಕನ್ನಡಪ್ರಭ

# ಅಧಿವೇಶನ ಅರ್ಥಪೂರ್ಣವಾಗಿಸಲು ಸಿಎಂಗೆ ವಿಪ ಸಭಾಪತಿ ಹೊರಟ್ಟಿ ಪತ್ರ

● **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿ. 4ರಿಂದ 15ರ ವರೆಗೆ 10 ದಿನಗಳ ಕಾಲ ರಾಜ್ಯ ಸರ್ಕಾರ ಚಳಿಗಾಲದ ಅಧಿವೇಶನವನ್ನು ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಪ ಸಭಾಪತಿ ಬಸವರಾಜ ಹೊರಟ್ಟಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರಿಗೆ ಪತ್ರ ಬರೆದಿದ್ದಾರೆ.



ಅಧಿವೇಶನದ ಅತ್ಯಮೂಲ್ಯವಾದ ಸಮಯ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರ ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿಹಲವಾರುಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸಬೇಕು. ಆ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು. ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದ್ದಾರೆ.

HUBBALLI Edition